# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ.**

**ಸಂಖ್ಯೆ: ಸ.ಅ/ವಾ-18/ಪಿ.ಆರ್/ 04/2020-21** **ದಿನಾಂಕ:10-11-2020**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 07-11-2020 ರಂದು ವಾರ್ಡ್ ನಂ:18, ರಾಧಾಕೃಷ್ಣ ದೇವಸ್ಥಾನರ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಸ್.ಬಸವರಾಜು. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಈ.ಈರಣ್ಣ. | ಸದಸ್ಯ ಕಾರ್ಯದರ್ಶಿ ವಾಡ್ ನಂ: 18 |
| 3. | ಶ್ರೀ. ನಾಗರಾಜ. | ಸಹಾಯಕ ಕಂದಾಯ ಅಧಿಕಾರಿ (ಹೆಬ್ಬಾಳ) |
| 4. | ಶ್ರೀ ಆನಂದ್. | ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ. |
| 5. | ಶ್ರೀಮತಿ ಮಮತ. | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ: 18 |
| 6. | ಶ್ರೀ. ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ: 18 |

ಪ್ರಾರಂಭಿಕವಾಗಿ ಸಭೆಯನ್ನು ಉದ್ದೇಶಿಸಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನಲ್ಲಿರುವ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರನ್ನು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಅಧಿಕಾರಿ ನೌಕರುಗಳು ಮತ್ತು ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಸೇರಿ ಸ್ವ-ಪರಿಚಯ ಮಾಡಿಕೊಳ್ಳಲಾಯಿತು.

ವಾರ್ಡಿನ ಅಧ್ಯಕ್ಷರು ಮಾತನಾಡುತ್ತಾ ವಾರ್ಡಿನಲ್ಲಿ ಅಭಿವೃದ್ಧಿಯಾಗಬೇಕಾಗಿರುವ ಹಾಗೂ ಕುಂದು ಕೊರತೆಗಳ ಬಗ್ಗೆ ಚರ್ಚಿಸಲಾಯಿತು.

- ಸಭೆಯಲ್ಲಿ ಹಾಜರಿದ್ದ ವಿಜ್ಞಾನಗೌಡ ರವರು Gail ಸಂಸ್ಥೆಯವರಿಂದ ಸುಮಾರು 500 ಫಲಾನುಭವಿಗಳಿಗೆ ಅನಿಲ ಸಂಪರ್ಕ ಕಲ್ಪಿಸಿಕೊಡುವ ಬಗ್ಗೆ ಕೋರಿದರು.
- ವಾರ್ಡ್ ಸಭೆಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿರವರು Gail ಸಂಸ್ಥೆಯವರಿಗೆ ನವೆಂಬರ್ ಅಂತ್ಯದಲ್ಲಿ 300 ಫಲಾನುಭವಿಗಳಿಗೆ ಹಾಗೂ ಡಿಸೆಂಬರ್ 15 ರ ಒಳಗಡೆ 200 ಫಲಾನುಭವಿಗಳಿಗೆ ಅನಿಲ ಸಂಪರ್ಕವನ್ನು ಕಲ್ಪಿಸಲು ಸೂಚಿಸಲಾಯಿತು.
- ವಿಷ್ಪರಿಂಗ್ ಮೆಡೋಸ್ ಬಳಿ ಸಿ.ಸಿ ಕ್ಯಾಮೆರಾವನ್ನು ದುರಸ್ಥಿ ಪಡಿಸಿ ಸುಸ್ಥಿತಿಯಲ್ಲಿಡಲು ಕಿರಿಯ ಅಭಿಯಂತರರು ವಿದ್ಯುತ್ ವಿಭಾಗರವರಿಗೆ ತಿಳಿಸಲಾಯಿತು.
- ವಾರ್ಡ್‌ನಲ್ಲಿ ಬರುವ ಬೀದಿ ದೀಪಗಳಿಗೆ ಟೈಮರ್‌ಗಳನ್ನು ಅಳವಡಿಸಲು ಅಂದಾಜುಪಟ್ಟಿ ಸಿದ್ದಪಡಿಸಿ ಮುಂದಿನ ಸಭೆಯಲ್ಲಿ ಸಲ್ಲಿಸಲು ಕಿರಿಯ ಅಭಿಯಂತರರು ವಿದ್ಯುತ್ ವಿಭಾಗರವರಿಗೆ ಸೂಚಿಸಲಾಯಿತು.
- 4ನೇ ಮುಖ್ಯರಸ್ತೆಯಲ್ಲಿ ಇರುವ ಮಳೆ ನೀರುಗಾಲುವೆಯ ಬಳಿ ನಿಲ್ಲಿಸಿರುವ ಜಂಕ್ ಆಟೋಗಳನ್ನು ಕೂಡಲೇ ತೆರವುಗೊಳಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- ರೈಲ್ವೇ ಅಂಡರ್ ಪಾಸ್‌ಗೆ ತಂತಿ ಬೇಲಿ ಅಳವಡಿಸುವ ಕಾಮಗಾರಿಯ ಕಾರ್ಯಾದೇಶವನ್ನು ತುರ್ತಾಗಿ ನೀಡಲು ಕ್ರಮ ವಹಿಸುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ರೈಲ್ವೇ ಟ್ರ್ಯಾಕ್ ಪಕ್ಕದಲ್ಲಿ ಶೇಖರಣೆಯಾಗಿರುವ ಕಟ್ಟಡದ ಅವಶೇಷಗಳನ್ನು ತೆರವುಗೊಳಿಸಲು ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಕ್ರಮವಹಿಸುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ಬೀದಿ ದೀಪಗಳ ಸುತ್ತಲೂ ಇರುವ ಮರದ ಕೊಂಬೆಗಳನ್ನು ಮುಂದಿನ ಸಭೆಯ ಒಳಗಾಗಿ ಕತ್ತರಿಸುವಂತೆ ಬೆಸ್ಕಾಂ ಮತ್ತು ಅರಣ್ಯಾಧಿಕಾರಿಗಳು ಬಿ.ಬಿ.ಎಂ.ಪಿ ರವರಿಗೆ ಜಂಟಿಯಾಗಿ ಕಾರ್ಯ ನಿರ್ವಹಿಸಿ ಕ್ರಮ ಜರುಗಿಸುವಂತೆ ಸೂಚಿಸಿದರು.
- ಮಳೆಗಾಲದಲ್ಲಿ ಒಳಚರಂಡಿ ನೀರು ಹುಕ್ಕಿ ಹರಿದು ಮನೆಗಳಿಗೆ ನುಗ್ಗುವುದರ ಬಗ್ಗೆ ಪರಿಶೀಲಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.
- ವಾರ್ಡ್‌ನಲ್ಲಿ ಬರುವ ಬೀದಿ ನಾಯಿಗಳ ಬಗ್ಗೆ ಸಮಗ್ರ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು ಪಶುಸಂಗೋಪನಾಧಿಕಾರಿಗಳಿಗೆ ಸೂಚಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

<u>ಪ್ರತಿಯನ್ನು:-</u>

5. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
7. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.